# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 809 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ.ನಮೋಶಿ |
| ಉತ್ತರಿಸಬೇಕಾದ ದಿನಾಂಕ | : | 24/02/2023 |
| ಉತ್ತರಿಸಬೇಕಾದವರು | : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ವಿಷಯ | ಉತ್ತರ |
|---|---|---|
| ಅ) | 2009-10ನೇ ಸಾಲಿನಲ್ಲಿ ಪ್ರಾರಂಭಿಸಲಾದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಿಗೆ 6 ರಿಂದ 12ನೇ ತರಗತಿಯವರೆಗೆ ಪ್ರಾರಂಭಿಸಲು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು<br>ಸರ್ಕಾರದ ಆದೇಶ ಸಂಖ್ಯೆ ಸಕಇ 53 ಎಂಡಿಎಸ್ 2009, ದಿನಾಂಕ 19.05.2009 ರಲ್ಲಿ ಪರಿಶಿಷ್ಟ ಜಾತಿ 82 ಹಾಗೂ ಪರಿಶಿಷ್ಟ ವರ್ಗದ 32 ಒಟ್ಟು 114 ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು 6 ರಿಂದ 12 ನೇ ತರಗತಿಯವರೆಗೆ ಆರಂಭಿಸಲು ಆದೇಶಿಸಿ, ಸದರಿ ಆದೇಶದಲ್ಲಿ 01 ರಿಂದ 10 ನೇ ತರಗತಿಯವರೆಗೆ ಮಾತ್ರ ಹುದ್ದೆಗಳನ್ನು ಸೃಜಿಸಿ ಮಂಜೂರು ಮಾಡಿರುವುದರಿಂದ 6 ರಿಂದ 10 ನೇ ತರಗತಿಯವರೆಗೆ ವಸತಿ ಶಾಲೆಗಳನ್ನು ನಡೆಸಲಾಗುತ್ತಿದೆ.<br>ಸರ್ಕಾರದ ಆದೇಶದನ್ವಯ 114 ವಸತಿ ಶಾಲೆಗಳ ಪೈಕಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ತೆಲಗರಳ್ಳಿ, ಆನೇಕಲ್ ತಾಲ್ಲೂಕು ಬೆಂಗಳೂರು ನಗರ 6 ರಿಂದ 12 ನೇ ತರಗತಿವರೆಗೆ ನಡೆಸಲಾಗುತ್ತಿದೆ. |
| ಆ) | ಈ ವಸತಿ ಶಾಲೆಗಳಲ್ಲಿ 6 ರಿಂದ 10ನೇ ತರಗತಿವರೆಗೆ ಮಾತ್ರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 11 ಮತ್ತು 12ನೇ ತರಗತಿಗಳನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು? | ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 11 ಮತ್ತು 12ನೇ ತರಗತಿಗಳನ್ನು ಪ್ರಾರಂಭಿಸಲು ಅನುದಾನದ ಲಭ್ಯತೆಯ ಅನುಗುಣವಾಗಿ ಅಗತ್ಯ ಕ್ರಮವಹಿಸಲಾಗುವುದು. |

ಸಕಇ 33 ಎಂಡಿಎಸ್ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.